# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 347 |
| 2 | ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 15-02-2024 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರ ವ್ಯಾಪ್ತಿಯಲ್ಲಿ ರಸ್ತೆಗಳನ್ನು ಆಗೆದು ಹಾಗೆಯೇ ಬಿಟ್ಟಿರುವುದರಿಂದ ರಸ್ತೆ ಅಪಘಾತಗಳು, ಸಾವು-ನೋವುಗಳು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಸ್ತೆ ಅಗೆತ ನಂತರ ರಸ್ತೆ ಪುನರ್ ನಿರ್ಮಾಣಕ್ಕೆ ಸಮಯಾವಕಾಶವು ಬೇಕಾಗುತ್ತಿದ್ದು, ಸದರಿ ಸಂದರ್ಭದಲ್ಲಿ ವಾಹನ ಸವಾರರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಆ ರಸ್ತೆಗಳನ್ನು ಅಗೆದು ತಿಂಗಳುಗಳ ಕಾಲ ಮುಂಜಾಗ್ರತಾ ಕ್ರಮಗಳಿಲ್ಲದೇ; ಮುಚ್ಚದಿರುವುದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; | • ರಸ್ತೆಗಳನ್ನು ಅಗೆದು ಅದರ ಪುನರ್ ನಿರ್ಮಾಣಕ್ಕೆ ಹೆಚ್ಚಿನ ಸಮಯ ತೆಗೆದುಕೊಳ್ಳುತ್ತಿದ್ದ ಹಿನ್ನಲೆಯಲ್ಲಿ ಸರ್ಕಾರವು ಸದರಿ ವ್ಯವಸ್ಥೆಯನ್ನು ಮಾರ್ಪಡಿಸಿ "ರಸ್ತೆಯನ್ನು ಅಗೆತ ಮಾಡುವ ಸಂಸ್ಥೆಗಳೇ ಅದರ ಪುನರ್ ನಿರ್ಮಾಣದ ಕಾಮಗಾರಿಯನ್ನು ಕೈಗೆತ್ತಿಕೊಳ್ಳಬೇಕೆಂದು" ನಿರ್ಣಯ ಕೈಗೊಳ್ಳಲಾಗಿರುತ್ತದೆ.<br>• ರಸ್ತೆ ಅಗೆತ ಮತ್ತು ರಸ್ತೆ ಗುಂಡಿಗಳ ಮುಚ್ಚುವಿಕೆ ಸಂಬಂಧ ಮಾರ್ಗಸೂಚಿಯನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 210 ಎಂಎನ್‌ವೈ 2017, ದಿನಾಂಕ: 10-12-2018ರಲ್ಲಿ ನೀಡಿ ಆದೇಶಿಸಲಾಗಿದೆ. |
| ಇ) | ಇಂತಹ ಪ್ರಕರಣಗಳಲ್ಲಿ ಸಾವು ನೋವು ಸಂಭವಿಸಿದಾಗ ಸರ್ಕಾರವು (ಬಿಬಿಎಂಪಿ) ಪರಿಹಾರ ನೀಡಿದೆಯೇ? (ವಿವರ ನೀಡುವುದು) | ರಸ್ತೆ ಗುಂಡಿಗಳಿಂದ ಅಪಘಾತ ಉಂಟಾಗಿರುತ್ತವೆಂದು ಕೆಲವು ದೂರುಗಳು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ದಾಖಲಾಗಿದ್ದು, ತನಿಖೆ ಪ್ರಗತಿಯಲ್ಲಿರುತ್ತದೆ. ಪ್ರಸ್ತುತ, ಯಾವುದೇ ಪ್ರಕರಣದಲ್ಲಿ ಪರಿಹಾರ ನೀಡಲಾಗಿರುವುದಿಲ್ಲ. |

**ನಅಇ 40 ಎಂಎನ್‌ವೈ 2024**

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ